## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ವಿಕಾಸ ಯೋಜನೆಯಡಿ ವಿವಿಧ ಜಿಲ್ಲೆಗಳ ವಿಧಾನಸಭಾ ಕ್ಷೇತ್ರಗಳಲ್ಲಿ ಗ್ರಾಮಗಳನ್ನು ವಿಶೇಷ ಪ್ರಕರಣದಡಿ ಆಯ್ಕೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರ ಆದೇಶ ಸಂಖ್ಯೆ:ಗ್ರಾಅಪ:50:ಸುಗ್ರಾಯೋ:2012 ದಿ:20.10.2014

2. ಮಾನ್ಯ ಸಚಿವರ ಟಿಪ್ಪಣಿ ಸಂಖ್ಯೆ: ಗ್ರಾಅಪ:3725:2015-16 ದಿ:7.1.2016

**ಪ್ರಸ್ತಾವನೆ:**

ಗ್ರಾಮಗಳ ಸಮಗ್ರ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ರಾಜ್ಯದ ಎಲ್ಲಾ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 1000 ಗ್ರಾಮಗಳನ್ನು ಆಯ್ಕೆ ಮಾಡಿ ಗ್ರಾಮ ವಿಕಾಸ ಯೋಜನೆಯನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದ. ಸದರಿ ಯೋಜನೆ ಅನುಷ್ಠಾನ ಮಾಡುವ ಬಗ್ಗೆ ಗ್ರಾಮದ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ವಿಷಯಗಳ ಬಗ್ಗೆ ಕ್ರಮಗಳ ಕುರಿತು ವಿವರವಾಗಿ ಮೇಲೆ ಓದಲಾದ ಸರ್ಕಾರದ ಆದೇಶವನ್ನು ಹೊರಡಿಸಿ ಮಾರ್ಗಸೂಚಿಯನ್ನು ಹೊರತರಲಾಗಿದೆ. ಅದರನ್ವಯ ಬೆಳಗಾವಿ, ಗದಗ, ಬೀದರ, ಚಿತ್ರದುರ್ಗ ಜಿಲ್ಲೆಗಳಲ್ಲಿ 10 ಗ್ರಾಮಗಳನ್ನು ಆಯ್ಕೆ ಮಾಡಿ ಬೆಳಗಾವಿ ಜಿಲ್ಲೆಯ ಸವದತ್ತಿ-ಯಲ್ಲಮ್ಮ, ರಾಮದುರ್ಗ, ಗದಗ ಜಿಲ್ಲೆಯ ಗದಗ, ರೋಣ, ಶಿರಹಟ್ಟಿ, ಬೀದರ ಜಿಲ್ಲೆಯ ಬಾಲ್ಕಿ, ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ, ಹೊಳಲ್ಕೆರೆ ಮತ್ತು ಧಾರವಾಡ ಜಿಲ್ಲೆಯ ಹುಬ್ಬಳ್ಳಿ ಮತಕ್ಷೇತ್ರಗಳ ಮಾನ್ಯ ವಿಧಾನಸಭಾ ಸದಸ್ಯರ ಮತ್ತು ಮಾನ್ಯ ಉಸ್ತುವಾರಿ ಸಚಿವರ ಕೋರಿಕೆಯನ್ನು ಆಧರಿಸಿ ಪ್ರಸ್ತಾವನೆಗೆ ಅನುಮೋದನೆ ನೀಡಲು ಮಾನ್ಯ ಸಚಿವರು ಸೂಚನಾದೇಶ ನೀಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಮಾರ್ಗಸೂಚಿಗಳನ್ವಯ ಪರಿಶೀಲಿಸಿದ್ದು, ಪ್ರಸ್ತಾಪಿತ ಗ್ರಾಮಗಳ ಆಯ್ಕೆ ಪಟ್ಟಿಯನ್ನು ಅಧಿಕೃತವಾಗಿ ಹೊರಡಿಸಲು ಸರ್ಕಾರಿ ಆದೇಶದ ಅಗತ್ಯವಿದೆ. ಅನುಬಂಧದಲ್ಲಿರುವ ಬೆಳಗಾವಿ, ಗದಗ, ಬೀದರ, ಚಿತ್ರದುರ್ಗ ಜಿಲ್ಲೆಗಳಲ್ಲಿ 10 ಗ್ರಾಮಗಳನ್ನು ಆಯ್ಕೆ ಮಾಡಿ ಬೆಳಗಾವಿ ಜಿಲ್ಲೆಯ ಸವದತ್ತಿ-ಯಲ್ಲಮ್ಮ, ರಾಮದುರ್ಗ, ಗದಗ ಜಿಲ್ಲೆಯ ಗದಗ, ರೋಣ, ಶಿರಹಟ್ಟಿ, ಬೀದರ ಜಿಲ್ಲೆಯ ಬಾಲ್ಕಿ, ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ, ಹೊಳಲ್ಕೆರೆ ಮತ್ತು ಧಾರವಾಡ ಜಿಲ್ಲೆಯ ಹುಬ್ಬಳ್ಳಿ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಆಯ್ಕೆಯಾದ ಗ್ರಾಮಗಳಲ್ಲಿ ಗ್ರಾಮವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ: 63 : ಗ್ರಾವಿಯೋ : 2015 ಬೆಂಗಳೂರು ದಿನಾಂಕ 16.01.2016**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಬೆಳಗಾವಿ, ಗದಗ, ಬೀದರ, ಚಿತ್ರದುರ್ಗ ಜಿಲ್ಲೆಗಳಲ್ಲಿ 10 ಗ್ರಾಮಗಳನ್ನು ಆಯ್ಕೆ ಮಾಡಿ ಬೆಳಗಾವಿ ಜಿಲ್ಲೆಯ ಸವದತ್ತಿ-ಯಲ್ಲಮ್ಮ, ರಾಮದುರ್ಗ, ಗದಗ ಜಿಲ್ಲೆಯ ಗದಗ, ರೋಣ, ಶಿರಹಟ್ಟಿ, ಬೀದರ ಜಿಲ್ಲೆಯ ಬಾಲ್ಕಿ, ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ, ಹೊಳಲ್ಕೆರೆ ಮತ್ತು ಧಾರವಾಡ ಜಿಲ್ಲೆಯ ಹುಬ್ಬಳ್ಳಿ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಗ್ರಾಮವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

1) ಓದಲಾದ (1)'ರ ಸರ್ಕಾರಿ ಆದೇಶದಲ್ಲಿ ಹೊರಡಿಸಲಾದ ಅನುದಾನದ ಮಿತಿಯಂತೆ ಅನುಬಂಧದಲ್ಲಿ ವಿವರಿಸಿರುವಂತೆ ಕ್ರಮ ವಹಿಸುವುದು.
2) ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾರ್ಗಸೂಚಿ ಪುಸ್ತಕದ ಪುಟ ಸಂಖ್ಯೆ 61 ಮತ್ತು 62ರಲ್ಲಿರುವ ಯೋಜನೆಯ ಅನುಷ್ಠಾನದ ವೇಳಾಪಟ್ಟಿಯಂತೆ ಅನುಷ್ಠಾನಕ್ಕೆ ತಂದು ಎಲ್ಲಾ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾರ್ಗಸೂಚಿಯಲ್ಲಿರುವಂತೆ ಅಕ್ಟೋಬರ್-02, 2016ರೊಳಗಾಗಿ ಮುಕ್ತಾಯಗೊಳಿಸಲು ಕ್ರಮ ಕೈಗೊಳ್ಳುವುದು.

3) ಗ್ರಾಮದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪ್ರದೇಶದ ಅಭಿವೃದ್ಧಿಗೆ ನಿಗದಿಪಡಿಸಿದ ಅನುದಾನವನ್ನು ಮಾರ್ಗಪಲ್ಲಟ ಮಾಡದೇ ಆ ಜನಾಂಗದವರು ವಾಸವಿರುವ ಪ್ರದೇಶದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳ ಪ್ರತ್ಯೇಕ ಕ್ರಿಯಾ ಯೋಜನೆಯನ್ನು ತಯಾರಿಸಿಕೊಂಡು ಅನುಷ್ಠಾನಕ್ಕೆ ತರುವುದು.

4) ಗ್ರಾಮ ವಿಕಾಸ ಯೋಜನೆಯ ಅನುದಾನ ಹಾಗೂ ಒಗ್ಗೂಡಿಸಿದ ಕಾರ್ಯಕ್ರಮಗಳ ಅನುದಾನವನ್ನು ಪ್ರತ್ಯೇಕವಾಗಿ ನಿರ್ವಹಿಸುವುದು ಹಾಗೂ ಆಯಾ ಕಾರ್ಯಕ್ರಮಗಳ ಅನುದಾನಕ್ಕೆ ಸರ್ಕಾರ ಹೊರಡಿಸಿದ ಆದೇಶ/ಮಾರ್ಗಸೂಚಿ/ಸುತ್ತೋಲೆಗಳನ್ವಯ ಅನುಷ್ಠಾನಕ್ಕೆ ತರುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/1/16

(ಬೂವನಹಳ್ಳಿನಾಗರಾಜ್)
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು ಮಾಹಿತಿಗಾಗಿ:

1. ಮಹಾಲೇಖಪಾಲರು (ಲೆಕ್ಕಪತ್ರ), (ಆಡಿಟ್-1 & 2), ಕರ್ನಾಟಕ, ಬೆಂಗಳೂರು
2. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ ವಿಧಾನ ಸೌಧ.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, , ಬೆಂಗಳೂರು.
4. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಬೆಳಗಾವಿ, ಗದಗ, ಬೀದರ, ಚಿತ್ರದುರ್ಗ ಮತ್ತು ಧಾರವಾಡ
5. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ ಮತ್ತು ಪಂ ರಾಜ್ ಇಲಾಖೆ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ ಮತ್ತು ಪಂ ರಾಜ್ ಇಲಾಖೆ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ ಮತ್ತು ಪಂ ರಾಜ್ ಇಲಾಖೆ, ಬೆಂಗಳೂರು.
11. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ, ಗದಗ, ಬೀದರ, ಚಿತ್ರದುರ್ಗ ಮತ್ತು ಧಾರವಾಡ
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಜಿಲ್ಲಾ ಖಜಾನಾಧಿಕಾರಿಗಳು ಬೆಳಗಾವಿ, ಗದಗ, ಬೀದರ, ಚಿತ್ರದುರ್ಗ ಮತ್ತು ಧಾರವಾಡ
15. ಮುಖ್ಯ ಇಂಜಿನಿಯರ್, ಪಂ.ಇಂ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
16. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
17. ಮುಖ್ಯ ಲೆಕ್ಕಾಧಿಕಾರಿಗಳು / ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ, ಗದಗ, ಬೀದರ, ಚಿತ್ರದುರ್ಗ ಮತ್ತು ಧಾರವಾಡ
18. ಮುಖ್ಯಸ್ಥರು ಗಣಕಕೋಶ / ವೆಬ್‌ಸೈಟ್‌ನಲ್ಲಿ ಪ್ರಕಟಿಸಲು, ಗ್ರಾ ಮತ್ತು ಪಂ.ರಾಜ್ ಇಲಾಖೆ. ಬೆಂಗಳೂರು.
19. ಸಂಪಾದಕರು, ಕರ್ನಾಟಕ ವಿಕಾಸ.
20. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

# ಅನುಬಂಧ

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ: 63 :ಗ್ರಾವಿಯೋ:2015 ಬೆಂಗಳೂರು

ದಿನಾಂಕ 16.1.2016

(ವಿಧಾನಸಭಾ ಕ್ಷೇತ್ರಗಳ ಗ್ರಾಮಗಳ ಆಯ್ಕೆಪಟ್ಟಿ)

| ಜಿಲ್ಲೆ | | ವಿಧಾನಸಭಾ ಕ್ಷೇತ್ರ | | ಕ್ರ.ಸಂ | ಗ್ರಾಮಗಳ ಹೆಸರು | ಗ್ರಾಮವಾರು ನಿಗದಿಪಡಿಸಿದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|---|---|---|
| 1 | ಬೆಳಗಾವಿ | 1 | ಸವದತ್ತಿ ಯಲ್ಲಮ್ಮ | 1 | ಹರಳಕಟ್ಟಿ | 75.00 |
| | | 2 | ರಾಮದುರ್ಗ | 1 | ಚಿಕ್ಕೊಪ್ಪ SK | 75.00 |
| 2 | ಗದಗ | 1 | ಗದಗ | 1 | ನಾಗಾವಿ | 75.00 |
| | | 2 | ರೋಣ | 1 | ಜಕ್ಕಲಿ | 75.00 |
| | | | | 2 | ಹಾಲಕೇರಿ | 75.00 |
| | | 3 | ಶಿರಹಟ್ಟಿ | 1 | ಮಾಗಡಿ | 75.00 |
| 3 | ಬೀದರ | 1 | ಬಾಲ್ಕಿ | 1 | ನಡೆಬಾನ | 75.00 |
| 4 | ಚಿತ್ರದುರ್ಗ | 1 | ಚಿತ್ರದುರ್ಗ | 1 | ಸಿರಿಗೇರೆ | 75.00 |
| | | 2 | ಹೊಳಲ್ಕೆರೆ | 1 | ದೊಡ್ಡಿಗನಾಳ | 75.00 |
| 5 | ಧಾರವಾಡ | 1 | ಹುಬ್ಬಳ್ಳಿ | 1 | ಕೋಳಿವಾಡ | 75.00 |

16/1/16